ಪಿ.ಡಬ್ಲ್ಯೂ-01

**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**ಸಿ.ಮಿಸ್.ನಂಃ 82/2026**

ಸಾಕ್ಷಿಯನ್ನು ದಿನಾಂಕಃ 03.03.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ. ಕೆ.ಎಸ್.ಎಸ್. ವಕೀಲರಿಂದಃ**

ನಾನು ಈ ಅರ್ಜಿಯಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ತಹಶೀಲ್ದಾರ್ ರವರು ನೀಡಿರುವ ಅಲಭ್ಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-1** ಎಂದು, ಗ್ರಾಮ ಆಡಳಿತ ಅಧಿಕಾರಿ ಹಾಗು ರಾಜಸ್ವ ನಿರೀಕ್ಷಕರು ನೀಡಿದ ವರದಿ ಹಾಗು ಮಹಜರ್ ನ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-2** ಮತ್ತು **ನಿ.ಪಿ.-3** ಎಂದು, 10 ನೇ ತರಗತಿಯ ಅಂಕ ಪಟ್ಟಿಯ ನೋಟರಿ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು **ನಿ.ಪಿ.-4** ಎಂದು, ಶಾಲಾ ದಾಖಲಾತಿ ಉದ್ಧರಣಾ ಪ್ರತಿಯನ್ನು ನೋಟರಿ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು **ನಿ.ಪಿ.-5** ಎಂದು ಮತ್ತು ಆಧಾರ್ ಕಾರ್ಡ್ ನ ನೋಟರಿ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು **ನಿ.ಪಿ.-6** ಎಂದು ಗುರುತಿಸಲಾಯಿತು.

ಸದರಿ ದಾಖಲೆಗಳನ್ನು ಪರಿಶೀಲಿಸಿ ನನ್ನ ಅರ್ಜಿಯನ್ನು ಪುರಸ್ಕರಿಸಿಕೊಳ್ಳಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಎದುರುದಾರರು ಏಕಪಕ್ಷೀಯವಾಗಿರುತ್ತಾರೆ. ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಲಾಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**